ರಸ್ತೆಯ ನಿರ್ಮಾಣದ ಕಾಮಗಾರಿಯನ್ನು ಕೈಬಿಡಲಾಗಿದೆ; ಹಾಗೂ ಕೆಶಿಪ್ ಯೋಜನೆ–1 ಈಗಾಗಲೇ ಮುಕ್ತಾಯಗೊಂಡಿರುತ್ತದೆ.

ಚನ್ನರಾಯಪಟ್ಟಣ ಪುರಸಭೆಯ ಉನ್ನತೀಕರಣ

1817(179); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೋಳ)

ಅ) ಶ್ರವಣಬೆಳಗೋಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಚನ್ನರಾಯಪಟ್ಟಣದ ಪುರಸಭೆಯನ್ನು ನಗರಸಭೆಯನ್ನಾಗಿ ಉನ್ನತೀಕರಿಸಲು ಉದ್ದೇಶಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಪುರಸಭೆಯನ್ನು ನಗರಸಭೆಯನ್ನಾಗಿ ಉನ್ನತೀಕರಿಸಲು ಇರುವ ಮಾನದಂಡಗಳೇನು;

ಇ) ಈ ಪುರಸಭೆಯು ಹೆಚ್ಚು ಸಾಂದ್ರತೆಯನ್ನು ಹೊಂದಿದ್ದು, ಈ ಪಟ್ಟಣವನ್ನು ಮೂಲಭೂತ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಿ ನಗರಸಭೆಯನ್ನಾಗಿ ಪರಿವರ್ತಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಖಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) ಇಲ್ಲ

ಆ) ಪುರಸಭೆಯನ್ನು ನಗರಸಭೆಯನ್ನಾಗಿ ಉನ್ನತೀಕರಿಸಲು ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ 3 ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ:

1. ಅಂಥ ಪ್ರದೇಶದ ಜನಸಂಖ್ಯೆ ಐವತ್ತು ಸಾವಿರಕ್ಕಿಂತ ಕಡಿಮೆಯಿಲ್ಲದ ಮತ್ತು ಮೂರು ಲಕ್ಷಕ್ಕಿಂತ ಹೆಚ್ಚಿಲ್ಲದ ಹೊರತು;

2. ಅಂಥ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋಮೀಟರ್ ಪ್ರದೇಶಕ್ಕೆ ಒಂದು ಸಾವಿರದ ಐನೂರು ನಿವಾಸಿಗಳಿಗಿಂತ ಕಡಿಮೆಯಿಲ್ಲದ ಹೊರತು;
3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂಥ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಿಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಭತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬನಿಗೆ ನಲವತ್ತೈದು ರೂ.ಗಳ ದರದಂತೆ ಲೆಕ್ಕ ಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆಯಿರದ ಹೊರತು;
4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗದ ಶೇಕಡಾವಾರು ಒಟ್ಟು ಉದ್ಯೋಗದ ಶೇಕಡ ಐವತ್ತಕ್ಕಿಂತ ಕಡಿಮೆಯಿಲ್ಲದ ಹೊರತು;

ಇ) 2011ರ ಜನಗಣತಿಯನ್ವಯ ಚನ್ನರಾಯಪಟ್ಟಣದ ಜನಸಂಖ್ಯೆ 38792 ಇದ್ದು, ಜನಸಾಂದ್ರತೆ 5221 ಇರುತ್ತದೆ. ಚನ್ನರಾಯಪಟ್ಟಣ ಪುರಸಭೆಯು ಹೆಚ್ಚು ಜನಸಾಂದ್ರತೆಯನ್ನು ಹೊಂದಿದ್ದರೂ ಸಹ ಕರ್ನಾಟಕ ಪುರಸಭೆಗಳ ಕಾಯ್ದೆ 1964 ರನ್ವಯ ಜನಸಂಖ್ಯೆಯು 50,000 ಕ್ಕಿಂತ ಕಡಿಮೆಯಿರುವುದರಿಂದ ನಗರಸಭೆಯನ್ನಾಗಿ ಪರಿವರ್ತಿಸಲು ಅರ್ಹವಿರುವುದಿಲ್ಲ.